# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1107 (1319) |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 19-12-2024 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುವ ವಿವಿಧ ಹುದ್ದೆಗಳ ಪರೀಕ್ಷೆಗಾಗಿ ಅಭ್ಯರ್ಥಿಗಳ ಪರೀಕ್ಷಾ ಕೇಂದ್ರಗಳನ್ನು ಯಾವ ನಿಯಮ ಹಾಗೂ ಮಾನದಂಡದಡಿಯಲ್ಲಿ ನಿಗದಿ ಪಡಿಸಲಾಗುತ್ತಿದೆ; | ಕರ್ನಾಟಕ ಲೋಕಸೇವಾ ಆಯೋಗವು ರಾಜ್ಯದ ನಾಗರೀಕ ಸೇವೆಗಳಲ್ಲಿನ ವಿವಿಧ ವೃಂದದ ಹುದ್ದೆಗಳ ನೇಮಕಾತಿಗಾಗಿ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮತ್ತು ಸರ್ಕಾರಿ ನೌಕರರಿಗೆ ವಿವಿಧ ವಿಷಯಗಳ ಇಲಾಖಾ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದಲ್ಲಿ ಪರೀಕ್ಷಾ ಉಪಕೇಂದ್ರಗಳನ್ನು ಆಯ್ಕೆ ಮಾಡಲು ಅನುಸರಿಸಬೇಕಾದ ಕ್ರಮಗಳನ್ನು ಮತ್ತು ಪರೀಕ್ಷಾ ಕೇಂದ್ರಗಳ ಆಯ್ಕೆಯ ಕುರಿತು ಆಯೋಗದ ಸಭೆಯಲ್ಲಿ ನಿಗದಿಪಡಿಸಲಾಗಿರುವ ಮಾನದಂಡಗಳ ಅನುಸಾರ ಆಯೋಗವು ಪರೀಕ್ಷೆಗಾಗಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸುತ್ತದೆ. |
| ಆ) | ಅಭ್ಯರ್ಥಿಗಳ ಪರೀಕ್ಷಾ ಕೇಂದ್ರಗಳನ್ನು ಅವರ ಸ್ಥಳೀಯ ಜಿಲ್ಲೆಗಳಿಗೆ ನಿಗದಿ ಪಡಿಸದೇ ದೂರದ ಜಿಲ್ಲಾಕೇಂದ್ರಗಳಿಗೆ ನಿಗದಿಪಡಿಸಲು ಕಾರಣವೇನು; ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮಾದರಿಯಲ್ಲೇ ಅಭ್ಯರ್ಥಿಗಳು ಇಚ್ಚಿಸಿದ ಅಥವಾ ಅವರ ಸ್ಥಳೀಯ ಜಿಲ್ಲೆಗಳಿಗೆ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಬಹುದಲ್ಲದೇ; | ಕರ್ನಾಟಕ ಲೋಕಸೇವಾ ಆಯೋಗವು ಹಿಂದಿನ ಸಾಲುಗಳಲ್ಲಿ ವಿವಿಧ ನೇಮಕಾತಿಗಳಿಗೆ ನಡೆಸಲಾದ ಪರೀಕ್ಷೆಗಳಲ್ಲಿ ಹೆಚ್ಚಿನ ಅಭ್ಯರ್ಥಿಗಳು ಅಕ್ರಮ ಎಸಗಿರುವುದು ಕಂಡುಬಂದಿದ್ದರಿಂದ ಹಾಗೂ ಕೆಲವು ದುರಾಚಾರ ಪ್ರಕರಣಗಳು ದಾಖಲಾಗಿದ್ದರಿಂದ ಪರೀಕ್ಷಾ ಅಕ್ರಮಗಳು/ದುರಾಚಾರ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಆಯೋಗದಿಂದ ಕಟ್ಟುನಿಟ್ಟಾದ ಆಧುನಿಕ ಭದ್ರತಾ ಕ್ರಮಗಳಾದ Frisking, Face recognition, CCTV ಅಳವಡಿಸುವ ಕ್ರಮಗಳನ್ನು ಅನುಸರಿಸಲಾಗುತ್ತಿದೆ. ಅಲ್ಲದೆ ಪುರುಷ (Male) ಅಭ್ಯರ್ಥಿಗಳನ್ನು ಮಾತ್ರ ಅರ್ಜಿಯಲ್ಲಿ ನಮೂದಿಸಿರುವ ಪತ್ರ ವ್ಯವಹಾರದ ವಿಳಾಸದ ಜಿಲ್ಲಾ ಕೇಂದ್ರವನ್ನು ಹೊರತುಪಡಿಸಿ ವಿಭಾಗೀಯ ಮಟ್ಟದಲ್ಲಿ ಸುತ್ತಮುತ್ತಲಿನ ಹತ್ತಿರದ ಜಿಲ್ಲೆಗಳ ಪರೀಕ್ಷಾ ಉಪಕೇಂದ್ರಗಳಿಗೆ ಹಂಚಿಕೆ ಮಾಡಲಾಗುತದೆ. |

| | | |
|---|---|---|
| | | ಉಳಿದಂತೆ ಅಂಗವಿಕಲ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಅವರು ಅರ್ಜಿಯಲ್ಲಿ ನಮೂದಿಸಿರುವ ಪತ್ರ ವ್ಯವಹಾರದ ವಿಳಾಸದ ಜಿಲ್ಲಾ ಕೇಂದ್ರಗಳ ಪರೀಕ್ಷಾ ಉಪಕೇಂದ್ರಗಳಿಗೆ ಹಂಚಿಕೆ ಮಾಡಲಾಗುತ್ತದೆ. |
| ಇ) | ಅಭ್ಯರ್ಥಿಗಳ ಸ್ಥಳೀಯ ಜಿಲ್ಲೆಗಳಿಂದ ದೂರದ ಜಿಲ್ಲೆಗಳಿಗೆ ಪರೀಕ್ಷಾ ಕೇಂದ್ರಗಳಿಗೆ ನಿಗದಿ ಮಾಡುವುದರಿಂದ ಬಡ ಹಾಗೂ ನಿರುದ್ಯೋಗ ಅಭ್ಯರ್ಥಿಗಳಿಗೆ ಬೇರೆ ಜಿಲ್ಲೆಗೆ ಪ್ರಯಾಣ, ವಸತಿ ಸೇರಿ ಹೆಚ್ಚಿನ ಆರ್ಥಿಕ ಹೊರೆ ಬೀಳುವುದಿಲ್ಲವೇ ಈ ಕುರಿತು ಅಭ್ಯರ್ಥಿಗಳ ಹಿತದೃಷ್ಠಿಯಿಂದ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು: ಅಭ್ಯರ್ಥಿಗಳಿಗೆ ವಸತಿಯಂತಹ ವ್ಯವಸ್ಥೆಯನ್ನು ಮಾಡಲು ಕ್ರಮ ಕೈಗೊಳ್ಳುವುದೇ; | ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪುರುಷ (Male) ಅಭ್ಯರ್ಥಿಗಳನ್ನು ಮಾತ್ರ ಅರ್ಜಿಯಲ್ಲಿ ನಮೂದಿಸಿರುವ ಪತ್ರ ವ್ಯವಹಾರದ ವಿಳಾಸದ ಜಿಲ್ಲಾ ಕೇಂದ್ರವನ್ನು ಹೊರತುಪಡಿಸಿ ವಿಭಾಗೀಯ ಮಟ್ಟದಲ್ಲಿ ಸುತ್ತಮುತ್ತಲಿನ ಹತ್ತಿರದ ಜಿಲ್ಲೆಗಳ ಪರೀಕ್ಷಾ ಉಪಕೇಂದ್ರಗಳಿಗೆ ಹಂಚಿಕೆ ಮಾಡಲಾಗುತ್ತಿದೆ. |
| ಈ) | ಪ್ರತಿ ಬಾರಿ ಪರೀಕ್ಷಾ ಅಕ್ರಮಗಳು ನಡೆಯುವ ಪರೀಕ್ಷಾ ಕೇಂದ್ರಗಳನ್ನು ಹೊಂದಿರುವ ಜಿಲ್ಲೆಗಳಲ್ಲಿ ಕೆಲವು ವರ್ಷಗಳ ಕಾಲ ತಾತ್ಕಾಲಿಕವಾಗಿ ಯಾವುದೇ ಪರೀಕ್ಷೆಗಳನ್ನು ನಡೆಸದೇ ಸರ್ಕಾರ ತೀರ್ಮಾನಿಸಿದೆಯೇ? | ಪರೀಕ್ಷಾ ಅಕ್ರಮಗಳು ವರದಿಯಾದ ಪರೀಕ್ಷಾ ಉಪಕೇಂದ್ರ/ಶಾಲಾ/ ಕಾಲೇಜು/ಸಂಸ್ಥೆಗಳನ್ನು ಮುಂದಿನ ಪರೀಕ್ಷೆಗಳಲ್ಲಿ ಪರಿಗಣಿಸಲಾಗಿರುವುದಿಲ್ಲ. |

**ಸಂಖ್ಯೆ.ಸಿಆಸುಇ 252 ಎಸ್‌ಎಲ್‌ಎ 2024**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ